# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:16ನೇ ಡಿಸೆಂಬರ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಸಂತಾಪ ಸೂಚನೆ

## 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಆರ್.ರಮೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 36 (334) } ಮಾನ್ಯ ಮುಖ್ಯಮಂತ್ರಿಗಳು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

## 03. ಚುನಾವಣಾ ಪ್ರಸ್ತಾವ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಭಾನಾಯಕರು ಹಾಗೂ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:-**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಗೆ ಸದಸ್ಯರುಗಳನ್ನು ಚುನಾಯಿಸುವ ಕುರಿತು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ 1992 ಪ್ರಕರಣ 18(1)(9) ರನ್ವಯ ವಿಧಾನ ಪರಿಷತ್ತಿನ ಇಬ್ಬರು ಸದಸ್ಯರುಗಳನ್ನು ಚುನಾಯಿಸಬೇಕೆಂದು ಸೂಚಿಸುವುದು.

## 04. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| ಶ್ರೀ ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಅವರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆಗಳು ನಾಶವಾಗಿ, ಜಾನುವಾರುಗಳ ಪ್ರಾಣ ಹಾನಿಯಾಗಿ ಸಾರ್ವಜನಿಕ ಆಸ್ತಿಗಳಿಗೆ ಧಕ್ಕೆ ಉಂಟಾಗಿರುವ ಸಮಸ್ಯೆಗಳ ಕುರಿತು. |

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ. ಹರೀಶ್ ಕುಮಾರ್** ಅವರು ಕಂದಾಯ ಇಲಾಖೆಯ ನ್ಯಾಯಾಲಯಗಳ ಡಿಕ್ರಿ ಆದೇಶದಂತೆ ಮ್ಯೂಟೇಶನ್ ಮಾಡಿ ಪಹಣಿಯಲ್ಲಿ ಬದಲಾವಣೆ ಮಾಡಲು 11 "ಇ" ನಕ್ಷೆ ಹಾಗೂ ಇತ್ಯಾದಿ ದಾಖಲೆಗಳ ಅವಶ್ಯಕತೆ ಇರುವುದಾಗಿ ತಿಳಿಸುತ್ತಿರುವುದರಿಂದ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವ ಕಾರಣದಿಂದ ಮ್ಯೂಟೇಶನ್ ಮಾಡಿ ಪಹಣಿಯಲ್ಲಿ ಸೂಕ್ತ ಬದಲಾವಣೆ ಮಾಡಲು ಸರಳೀಕೃತ ವ್ಯವಸ್ಥೆ ಜಾರಿಗೆ ತರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀಮತಿ ವೀಣಾ ಅಚ್ಚಯ್ಯ** ಅವರು ಪ್ರಾಕೃತಿಕ ವಿಕೋಪದಿಂದ ಕಾಫಿ ಬೆಳೆಗೆ ಆಗುತ್ತಿರುವ ನಷ್ಟಕ್ಕೆ ನ್ಯಾಯಸಮ್ಮತ ಪರಿಹಾರ ದೊರೆಯದೆ ಇರುವ ಕಾರಣ ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ವಿಷಯದ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

03. **ಶ್ರೀ ಯು.ಬಿ.ವೆಂಕಟೇಶ್** ಅವರು ಬೆಂಗಳೂರು ನಗರದ ಚಾಲುಕ್ಯ ವೃತ್ತದಿಂದ ದೇವನಹಳ್ಳಿ ಅಂತರ ರಾಷ್ಟ್ರೀಯ ವಿಮಾಣ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಉದ್ದೇಶಿತ ಯೋಜನೆಯ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

04. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಆಹಾರ ಸುರಕ್ಷತೆ ಮತ್ತು ಮಾನದಂಡ ಕಾಯ್ದೆ 2006ನ್ನು ಜಾರಿಗೊಳಿಸಿ ರಾಜ್ಯದಲ್ಲಿ ನಡೆಯುವ ಆಹಾರ ಕಲಬೆರಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ವಿಫಲವಾಗಿರುವ ಕುರಿತು ಹಾಗೂ ರಾಜ್ಯದಲ್ಲಿ ತಯಾರಾಗುವ ಬೆಲ್ಲವು ರಾಸಾಯನಿಕ ವಸ್ತು ಮತ್ತು ಸಕ್ಕರೆ ಮಿಶ್ರಣದಿಂದ ಕೂಡಿರುವ ಕಾರಣದಿಂದ ಕಲಬೆರಕೆ ಬೆಲ್ಲವನ್ನು ಕೊಂಡುಕೊಳ್ಳಲು ಇತರೆ ರಾಜ್ಯಗಳು ತಿರಸ್ಕರಿಸುತ್ತಿರುವ ವಿಷಯದ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಪಿ.ಆರ್. ರಮೇಶ್** ಅವರು ಲೋಕಸೇವಾ ಆಯೋಗವು ಸಲ್ಲಿಸಿದ್ದ 2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್‌ಗಳ ಆಯ್ಕೆ ಪಟ್ಟಿ/ಸಲಹೆಗೆ ಸಂಬಂಧಿಸಿದಂತೆ ದಿನಾಂಕ:09.03.2018ರ (ರಿಟ್ ಸಂಖ್ಯೆ:13617-13627/2017 ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪನ್ನು ಪಾಲಿಸುವುದರ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀ ಸಿ.ಎಂ. ಇಬ್ರಾಹಿಂ** ಅವರು ರಾಜ್ಯದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಕಾಮಗಾರಿಗಳ ಮೊತ್ತದ ಶೇಕಡ 40ರಷ್ಟು ಮೊತ್ತ ಲಂಚದ ರೂಪದಲ್ಲಿ ವ್ಯಯವಾಗುತ್ತಿದ್ದು, ಭ್ರಷ್ಟಾಚಾರ ತಾಂಡವವಾಡುತ್ತಿರುವ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀಯುತರುಗಳಾದ ಅರುಣ ಶಹಾಪೂರ, ಪುಟ್ಟಣ್ಣ, ಮರಿತಿಬ್ಬೇಗೌಡ ಮತ್ತು ಕೆ.ಟಿ.ಶ್ರೀಕಂಠೇಗೌಡ** ಅವರುಗಳು 1995ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦೪. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆ ತಾಲ್ಲೂಕಿನ ಡಿ.ಜಿ. ಗುಪ್ಪೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಬುಡಕಟ್ಟು ಜನರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಲ್ಲದಿರುವ ಬಗ್ಗೆ ಪ್ರಸ್ತಾಪಿಸುವುದು.

೦೫. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ತಕರಾರು ಇರುವ ಜಮೀನುಗಳ ಪೋಡಿ ಮಾಡಿಕೊಡಲು ಮತ್ತು ದರಖಾಸ್ತು ಮುಖಾಂತರ ಮಂಜೂರಾದ ಜಮೀನುಗಳಿಗೆ ಏಕವ್ಯಕ್ತಿ ಪೋಡಿ ಮಾಡಿಕೊಡಲು ತಹಶೀಲ್ದಾರ್‌ರವರಿಗೆ ಅಧಿಕಾರವಿದ್ದರೂ ಸಹ ಕಡತಗಳನ್ನು ಎಡಿಎಲ್‌ಆರ್ ಮತ್ತು ಡಿಡಿಎಲ್‌ಆರ್ ರವರುಗಳಿಗೆ ಕಳುಹಿಸುತ್ತಿರುವ ಕಾರಣದಿಂದ ಅನಾವಶ್ಯಕ ವಿಳಂಬವಾಗುತ್ತಿದ್ದು, ಭೂ ದಾಖಲೆಗಳ ಕಚೇರಿಗಳಲ್ಲಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

## ೦೭. ಖಾಸಗಿ ಸದಸ್ಯರ ಕಾರ್ಯಕಲಾಪ

### ಖಾಸಗಿ ನಿರ್ಣಯ

ದೇಸೀಯಾ ಪರಂಪರೆಯ ಆಯುರ್ವೇದ ವೈದ್ಯ ಪದ್ದತಿಗೆ ಮನ್ನಣೆ ದೊರಕಿಸಿ ಕೊಡುವ ಸಲುವಾಗಿ ನೀತಿಯೊಂದನ್ನು ರೂಪಿಸುವ ಕುರಿತು **ಶ್ರೀ ಯು.ಬಿ. ವೆಂಕಟೇಶ್** ಅವರು ಮಂಡಿಸಿರುವ ನಿರ್ಣಯದ ಮೇಲೆ ಚರ್ಚೆ.

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಮೈಸೂರು ಲ್ಯಾಂಪ್ಸ್ ಕಾರ್ಖಾನೆಯ ಜಾಗದಲ್ಲಿ ವಸ್ತು ಸಂಗ್ರಹಾಲಯ ನಿರ್ಮಿಸುತ್ತಿರುವ ಕುರಿತು ದಿನಾಂಕ:14.12.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:16 (214 + 176)**ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕಾಂತರಾಜು (ಬಿಎಂಎಲ್) ಮತ್ತು ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**